| |
|---|
| **Deposition Sheets (RP.No.57) Form No.4** |

**IN THE COURT OF II Addl. CIVIL JUDGE & J.M.F.C., KARKALA.**

**Criminal Case No. 44/2022**

ಪಿ.ಡಬ್ಲ್ಯು ಃ 4 ಸಿ.ಡಬ್ಲ್ಯು ಃ 4

ಸಾಕ್ಷಿದಾರನ ಹೆಸರು ಃ ಶಂಕರ
ತಂದೆಯ ಹೆಸರು ಃ ಬೊಗ್ಗು
ಪ್ರಾಯ ಃ 29 ವರ್ಷ
ಉದ್ಯೋಗ ಃ ಕೂಲಿ
ವಾಸ ಃ ಮುಡಾರು

ದಿನಾಂಕ 15.04.2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರುಃ-**

ಸಾಕ್ಷಿಯು ನಿಪಿ-2 ತಕ್ಷೀರು ಸ್ಥಳ ಮಹಜರು ಹಾಗೂ ನಿಪಿ-3 ಕಚ್ಚಾ ನಕಾಶೆಯಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಗಳನ್ನು ನಿಪಿ-2(ಬಿ) ಮತ್ತು 3(ಬಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಗಳನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಪೊಲೀಸರು ನನ್ನನ್ನು ಯಾವುದೇ ಸ್ಥಳಗಳಿಗೆ ಕರೆದುಕೊಂಡು ಹೋಗಿರುವುದಿಲ್ಲ ಹಾಗೂ ನನ್ನ ಸಮಕ್ಷಮ ಯಾವುದೇ ಸೊತ್ತುಗಳನ್ನು ಸ್ವಾಧೀನಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ನಿಪಿ-4 ಘಟನಾ ಸ್ಥಳದ ಭಾವಚಿತ್ರವನ್ನು ನೋಡಿ ಗುರುತಿಸಿರುತ್ತಾರೆ. ಅಪಘಾತ ನಡೆದ 5-6 ದಿನಗಳ ನಂತರ ಪೊಲೀಸರು ನನ್ನನ್ನು ಬಜಗೋಳಿ ಪೇಟೆ ಬರಲು ಹೇಳಿ ಸದ್ರಿ ಭಾವಚಿತ್ರವನ್ನು ತೆಗೆದಿರುತ್ತಾರೆ. ಘಟನೆಯ ಕುರಿತು ಪೊಲೀಸರ ಮುಂದೆ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸಸಅ ರವರು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು)

<u>**ಪಾಟೀ ಸವಾಲು**</u> **ಃ** <u>**ಸಹಾಯಕ ಸರ್ಕಾರಿ ಅಭಿಯೋಜಕರುಃ-**</u>

2. ದಿಃ10.09.2021 ರಂದು ಪೊಲೀಸರು ಕಾರ್ಕಳ ತಾಲೂಕಿನ ಬಜಗೋಳಿಯ ಕಂಬಳ ಕ್ರಾಸ್ ಎಂಬಲ್ಲಿಗೆ ನನ್ನನ್ನು ಕರೆದುಕೊಂಡು ಹೋಗಿ ನನ್ನ ಹಾಗೂ ಚಾಸಾ-5 ರವರ ಸಮಕ್ಷಮ ಸ್ಥಳ ಮಹಜರು ನಡೆಸಿ ದ್ವಿ ಚಕ್ರ ವಾಹನ ನಂಬ್ರ ಕೆಎ-19-ಇ-ಪಿ-4210 ನ್ನು ಸ್ವಾಧೀನಪಡಿಸಿಕೊಂಡಿರುತ್ತಾರೆ ಹಾಗೂ ಕಚ್ಚಾ ನಕಾಶೆಯನ್ನು ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಈಗ ನನಗೆ ಓದಿ ಹೇಳಿದಂತೆ ದಿಃ10.09.2021 ರಂದು ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿಪಿ-9 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>**ಪಾಟೀ ಸವಾಲು**</u> ಃ ಆರೋಪಿ ಪರ ಃ ಶ್ರೀ ಬಿ ಕೆ ವಕೀಲರಿಂದ ಃ

ಪ್ರಶ್ನಿತ ಅಪಘತಾವು ಪ್ರಸನ್ನ ಎಂಬುವವರ ತಪ್ಪಿನಿಂದ ಆಗಿರುತ್ತದೆ. ಪ್ರಸನ್ನ ರವರನ್ನು ನಾನು ನೋಡಿರುತ್ತೇನೆ. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ ಪಸನ್ನ ಆಗಿರುವುದಿಲ್ಲ. ಆರೋಪಿಗೂ ಮತ್ತು ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿ.

ಮರುವಿಚಾರಣೆ ಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ. ಕಾರ್ಕಳ